ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	59
ಮಾನ್ಯ ಸದಸ್ಯರ ಹೆಸರು	ಶ್ರೀ ಹೆಚ್.ಎಂ. ರಮೇಶ ಗೌಡ (ವಿದಾನಸಭೆಯಿಂಧ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	15.07.2019
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ	ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯದ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೊಸದಾಗಿ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳ ಬೇಡಿಕೆ ಎಷ್ಟಿದೆ;	ಬಂದಿದೆ. 2018-19 ಮತ್ತು 2019-20ನೇ ಸಾಲಿಗೆ ಹೊಸದಾಗಿ 115 ಮೆಟ್ರಿಕ್-ಪೂರ್ವ ಹಾಗೂ 104 ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳ ಬೇಡಿಕೆಯಿರುತ್ತದೆ.
ಆ	ರಾಜ್ಯದ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ನಿರ್ವಹಣೆ ಹಾಗೂ ಸ್ಥಿತಿಗತಿಗಳ ಮಾಹಿತಿ ನೀಡುವುದು;	ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಇಲಾಖೆಯಿಂದ ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಿ, ನಿರ್ವಹಣೆ ಮಾಡಲಾಗುತ್ತಿದ್ದು, ನಿಲಯಗಳ ನಿರ್ವಹಣೆಯು ಪ್ರಮುಖವಾಗಿ ಈ ಕೆಳಕಂಡ ಅಂಶಗಳನ್ನು ಹೊಂದಿದೆ. 1) ಉತ್ತಮ ವಸತಿ ಸೌಕರ್ಯ 2) ಉತ್ತಮ ಆಹಾರ ಪೂರೈಕೆ 3) ಶೈಕ್ಷಣಿಕ ಅಭಿವೃದ್ಧಿ 4) ಉತ್ತಮ ಆರೋಗ್ಯ 5) ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ನಿಲಯಾರ್ಥಿಗಳ ವ್ಯಕ್ತಿತ್ವ ವಿಕಸನ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ 1302 ಮೆಟ್ರಿಕ್–ಪೂರ್ವ ವಿದ್ಯಾರ್ಥಿನಿಲಯಗಳು ಹಾಗೂ 1136 ಮೆಟ್ರಿಕ್–ನಂತರದ ವಿದ್ಯಾರ್ಥಿನಿಲಯಗಳು ಹೀಗೆ ಒಟ್ಟು 2438 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿರುತ್ತವೆ.

ಈ ಪೈಕಿ 1325 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ, 82 ವಿದ್ಯಾರ್ಥಿನಿಲಯಗಳು ಉಚಿತ ಕಟ್ಟಡಗಳಲ್ಲಿ ಹಾಗೂ 1031 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುತ್ತವೆ.

ನಿಲಯಾರ್ಥಿಗಳಿಗೆ ವಸತಿ ಸೌಕರ್ಯದ ಜೊತೆಗೆ ಉತ್ತಮ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಪ್ರಸ್ತುತ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ರೂ.1500/– ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ರೂ.1600/– ರ ದರದಲ್ಲಿ ಉತ್ತಮ ಗುಣಮಟ್ಟದ ಪೌಷ್ಠಿಕ ಆಹಾರವನ್ನು ನೀಡುವ ಜೊತೆಗೆ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿರುತ್ತದೆ.

1. **ಮೆಟ್ರಿಕ್–ಪೂರ್ವ ವಿದ್ಯಾರ್ಥಿಗಳಿಗೆ**

- ಆಹಾರ ವೆಚ್ಚ ಮಾಸಿಕ ರೂ.1500/–ರಂತೆ 10 ತಿಂಗಳಿಗೆ
- ಉಚಿತ ವಸತಿ ಸೌಲಭ್ಯ
- ಸಮವಸ್ತ್ರಗಳು 2 ಜೊತೆ (ರೂ.1000/– ದರದಲ್ಲಿ)
- ಪಠ್ಯಪುಸ್ತಕ ಮತ್ತು ಲೇಖನಸಾಮಗ್ರಿ ವಾರ್ಷಿಕ ರೂ.400/–
- ಜಮಖಾನ ಮತ್ತು ಹೊದಿಕೆಗಳು ಪ್ರತಿ 3 ವರ್ಷಕ್ಕೊಮ್ಮೆ
- ವೈದ್ಯಕೀಯ ವೆಚ್ಚ – 50 ಸಂಖ್ಯಾಬಲದ ವಿದ್ಯಾರ್ಥಿನಿಲಯಕ್ಕೆ ವಾರ್ಷಿಕ ರೂ.5000/–
  50 ಕ್ಕಿಂತ ಮೇಲ್ಪಟ್ಟ ವಿದ್ಯಾರ್ಥಿನಿಲಯಕ್ಕೆ ವಾರ್ಷಿಕ ರೂ.10000/–
- ಪ್ರತಿ ಅರೆಕಾಲಿಕ ಬೋಧಕರಿಗೆ ಮಾಸಿಕ ರೂ.2,000/–ರಂತೆ (6 ತಿಂಗಳಿಗೆ) 3 ಬೋಧಕರು ಪ್ರತಿ ವಿದ್ಯಾರ್ಥಿನಿಲಯಕ್ಕೆ
- ಮಾಸಿಕ ಶುಚಿ ಸಂಭ್ರಮ ಕಿಟ್ (ಸೋಪು, ಡಿಟರ್ಜೆಂಟ್ಸ್ ಕೇಕ್, ಕೊಬ್ಬರಿ ಎಣ್ಣೆ, ಟೂತ್ ಪೇಸ್ಟ್, ಟಾಲ್ಕಂ ಪೌಡರ್)
- ಕ್ಷೌರದ ವೆಚ್ಚ ಪ್ರತಿ ವಿದ್ಯಾರ್ಥಿಗೆ ರೂ.60/– ರಂತೆ (ಬಾಲಕರಿಗಾಗಿ ಮಾತ್ರ) (5 ಬಾರಿ ಮಾತ್ರ)
- ಕ್ರೀಡಾ ಸಾಮಗ್ರಿಗಳು ವಾಸ್ತವ ದರದಲ್ಲಿ ನಿಲಯಕ್ಕೆ ಒಂದು ಸೆಟ್ ಪ್ರತಿ ವರ್ಷಕ್ಕೊಮ್ಮೆ
- ರಾಜ್ಯಮಟ್ಟದ ಒಂದು ಆಂಗ್ಲ ಮತ್ತು ಒಂದು ಕನ್ನಡ ದಿನಪತ್ರಿಕೆ ಹಾಗೂ Wisdom Magazine–I
- ವಿದ್ಯಾರ್ಥಿನಿಲಯದ ಗ್ರಂಥಾಲಯಕ್ಕಾಗಿ ಪ್ರಥಮ ಬಾರಿಗೆ ರೂ.50,000/– ನಂತರದ ಪ್ರತಿ ವರ್ಷಕ್ಕೆ

<table>
<tr>
<td>ಇ</td>
<td>ತುಮಕೂರು ಜಿಲ್ಲೆಯ ಗಣಿಬಾಧಿತ ಪ್ರದೇಶಗಳ ಹಿಂದುಳಿದ ವರ್ಗಗಳ ಜನ ಕಲ್ಯಾಣಕ್ಕಾಗಿ ಸರ್ಕಾರ ಯಾವ ಯೋಜನೆಗಳನ್ನು ಕೈಗೊಳ್ಳಲಾಗಿದೆ; (ಮಾಹಿತಿ ನೀಡುವುದು)</td>
<td>ತುಮಕೂರು ಜಿಲ್ಲೆಯಲ್ಲಿ ತಿಪಟೂರು, ಚಿಕ್ಕನಾಯಕನಹಳ್ಳಿ ಭಾಗಗಳು ಗಣಿಗಾರಿಕೆ ಪ್ರದೇಶವಾಗಿದ್ದು, ಕೆಲವು ವಿದ್ಯಾರ್ಥಿನಿಲಯಗಳು ಗಣಿಗಾರಿಕೆ ಪ್ರದೇಶದ ವ್ಯಾಪ್ತಿಗೆ ಒಳಪಡುವ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ 03 ವಿದ್ಯಾರ್ಥಿನಿಲಯಗಳ ಕಟ್ಟಡ ಹಾಗೂ ತಿಪಟೂರು ತಾಲ್ಲೂಕಿನಲ್ಲಿ 03 ವಿದ್ಯಾರ್ಥಿನಿಲಯಗಳ ಕಟ್ಟಡಗಳ ನಿರ್ಮಾಣಕ್ಕೆ ಮತ್ತು ವಿದ್ಯಾರ್ಥಿನಿಲಯದ ಮೂಲಭೂತ ಸೌಕರ್ಯಗಳಿಗಾಗಿ ಅಂದಾಜು ರೂ.25.00 ಕೋಟಿಗಳ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲಾಗಿದೆ.

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ
ತುಮಕೂರು ಜಿಲ್ಲೆಯ ಗಣಿಬಾಧಿತ ಪ್ರದೇಶಗಳ ಹಿಂದುಳಿದ ವರ್ಗಗಳ ಜನ ಕಲ್ಯಾಣಕ್ಕಾಗಿ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಡಿಯಲ್ಲಿಯೇ ಗಣಿಬಾಧಿತ ಪ್ರದೇಶವು ಸೇರಿದಂತೆ ಹಿಂದುಳಿದ ವರ್ಗಗಳ ಜನರ ಆರ್ಥಿಕಾಭಿವೃದ್ಧಿಗಾಗಿ ಸಾಲ ಮತ್ತು ಸಹಾಯಧನದ ಸೌಲಭ್ಯ ಒದಗಿಸಲಾಗುತ್ತಿದೆ.</td>
</tr>
<tr>
<td>ಈ</td>
<td>ರಾಜ್ಯದ ವಿವಿಧ ಭಾಗಗಳ ಹಿಂದುಳಿದ ವರ್ಗಗಳ ಜನಕಲ್ಯಾಣಕ್ಕಾಗಿ ಈ ಮೂರು ವರ್ಷಗಳಿಂದ ಬಿಡುಗಡೆಯಾದ ಅನುದಾನವೆಷ್ಟು; (ಮಾಹಿತಿ ನೀಡುವುದು)</td>
<td>ರಾಜ್ಯದ ವಿವಿಧ ಭಾಗಗಳ ಹಿಂದುಳಿದ ವರ್ಗಗಳ ಅಭಿವೃದ್ಧಿ ಮತ್ತು ಕಲ್ಯಾಣಕ್ಕಾಗಿ ಕಳೆದ ಮೂರು ವರ್ಷಗಳಿಂದ ಬಿಡುಗಡೆಯಾದ ಅನುದಾನದ ವಿವರ ಈ ಕೆಳಕಂಡಂತಿರುತ್ತದೆ.
<table>
<tr><th>ಕ್ರಮ ಸಂಖ್ಯೆ</th><th>ಆರ್ಥಿಕ ವರ್ಷ</th><th>ಬಿಡುಗಡೆಯಾದ ಅನುದಾನ (ರೂ. ಲಕ್ಷಗಳಲ್ಲಿ)</th></tr>
<tr><td>1</td><td>2016–17</td><td>220890.00</td></tr>
<tr><td>2</td><td>2017–18</td><td>279151.80</td></tr>
<tr><td>3</td><td>2018–19</td><td>270957.14</td></tr>
</table>
ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ
ರಾಜ್ಯದ ವಿವಿಧ ಭಾಗಗಳ ಹಿಂದುಳಿದ ವರ್ಗಗಳ ಜನಕಲ್ಯಾಣಕ್ಕಾಗಿ ಈ ಮೂರು ವರ್ಷಗಳಿಂದ ನಿಗಮದಿಂದ ಬಿಡುಗಡೆಯಾದ ಅನುದಾನ ರೂ.109998.02ಲಕ್ಷಗಳು. ಮಾಹಿತಿ ಈ ಕೆಳಕಂಡಂತಿದೆ.
(ಲಕ್ಷ ರೂ.ಗಳಲ್ಲಿ)
<table>
<tr><th>ಕ್ರ ಸಂ.</th><th>ವರ್ಷ</th><th>ನಿಗಮದಿಂದ ಬಿಡುಗಡೆಯಾದ ಅನುದಾನ</th><th>ಸೌಲಭ್ಯ ಪಡೆದ ಫಲಾನುಭವಿಗಳು</th></tr>
<tr><td>1</td><td>2016–17</td><td>30146.09</td><td>91473</td></tr>
<tr><td>2</td><td>2017–18</td><td>39922.86</td><td>71872</td></tr>
<tr><td>3</td><td>2018–19</td><td>39929.07</td><td>62842</td></tr>
<tr><td></td><td>ಒಟ್ಟು</td><td>109998.02</td><td>226187</td></tr>
</table></td>
</tr>
</table>

ರೂ.5,000/–

- ಪುಸ್ತಕ ಹಾಗೂ ಲೇಖನ ಸಾಮಗ್ರಿಗಳನ್ನು ಇಟ್ಟುಕೊಳ್ಳಲು ಟ್ರಂಕ್ ಗಳ ಪೂರೈಕೆ.
- ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲಕ್ಕಾಗಿ ಕಂಪ್ಯೂಟರ್ ಮತ್ತು ಇಂಟರ್‌ನೆಟ್ ವ್ಯವಸ್ಥೆ.

2. ಮೆಟ್ರಿಕ್–ನಂತರದ ವಿದ್ಯಾರ್ಥಿಗಳು

- ಆಹಾರ ವೆಚ್ಚ ಮಾಸಿಕ ರೂ.1600/–ರಂತೆ 10 ತಿಂಗಳಿಗೆ
- ಉಚಿತ ವಸತಿ ಸೌಲಭ್ಯ
- ಮಾಸಿಕ ಶುಚಿ ಸಂಭ್ರಮ ಕಿಟ್ (ಸೋಪು, ಡಿಟರ್ಜೆಂಟ್ಸ್ ಕೇಕ್, ಕೊಬ್ಬರಿ ಎಣ್ಣೆ, ಟೂತ್ ಪೇಸ್ಟ್, ಟಾಲ್ಕಂ ಪೌಡರ್)
- ಕ್ರೀಡಾ ಸಾಮಗ್ರಿಗಳು ಪ್ರತಿ ವರ್ಷಕ್ಕೊಮ್ಮೆ, ಪ್ರತಿ ನಿಲಯಕ್ಕೆ, ಒಂದು ಸೆಟ್ ವಾಸ್ತವ ದರದಲ್ಲಿ
- ರಾಜ್ಯಮಟ್ಟದ ಒಂದು ಆಂಗ್ಲ, ಒಂದು ಕನ್ನಡ ದಿನಪತ್ರಿಕೆ, Employment News-1, Competition Success Review/Wizard-1, Mirror Magazine-1
- ಅ) ಸ್ನಾತಕೋತ್ತರ / ವೃತ್ತಿಪರ ವಿದ್ಯಾರ್ಥಿನಿಲಯಗಳ ಗ್ರಂಥಾಲಯಕ್ಕಾಗಿ ಪ್ರಥಮ ಬಾರಿಗೆ ರೂ.1.25 ಲಕ್ಷ, ನಂತರದ ಪ್ರತಿ ವರ್ಷಕ್ಕೆ ರೂ.30,000/–
  ಆ) ಇತರೆ ವಿದ್ಯಾರ್ಥಿನಿಲಯಗಳಿಗೆ ಪ್ರಥಮ ಬಾರಿಗೆ ರೂ.1.00 ಲಕ್ಷ, ನಂತರದ ಪ್ರತಿ ವರ್ಷಕ್ಕೆ ರೂ.20,000/–
- ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲಕ್ಕಾಗಿ ಕಂಪ್ಯೂಟರ್ ಮತ್ತು ಇಂಟರ್‌ನೆಟ್ ವ್ಯವಸ್ಥೆ.

ಇದಲ್ಲದೆ, ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಗನುಗುಣವಾಗಿ ಸೋಲಾರ್ ಲೈಟ್, ಟಿ.ವಿ, ಸೋಲಾರ್ ವಾಟರ್ ಹೀಟರ್, ಶುದ್ಧ ಕುಡಿಯುವ ನೀರಿಗಾಗಿ ವಾಟರ್ ಪ್ಯೂರಿಫೈಯರ್ ಹಾಗೂ ಇನ್ನಿತರೆ ಮೂಲಭೂತ ಸೌಲಭ್ಯವನ್ನು ಒದಗಿಸಲಾಗಿರುತ್ತದೆ.

ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳು ಉತ್ತಮ ಸ್ಥಿತಿಯಲ್ಲಿದ್ದು, ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಲವೊಂದು ವಿದ್ಯಾರ್ಥಿನಿಲಯಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಯಿದ್ದು, ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆ ಹಾಗೂ ನಿವೇಶನದ ಲಭ್ಯತೆಗನುಗುಣವಾಗಿ ಹಂತ ಹಂತವಾಗಿ ಸ್ವಂತ ಕಟ್ಟಡಗಳನ್ನು ನಿರ್ಮಿಸಿ, ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುತ್ತದೆ.

ಉ	ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಡಿಯಲ್ಲಿ ಚೈತನ್ಯ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯಲ್ಲಿ ನೆರವು ಪಡೆದ ಫಲಾನುಭವಿಗಳೆಷ್ಟು? (ವಿವರ ನೀಡುವುದು)	ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಡಿಯಲ್ಲಿ ಚೈತನ್ಯ ಸ್ವಯಂ ಉದ್ಯೋಗ ನೇರ ಸಾಲಯೋಜನೆಯಲ್ಲಿ ಈ ಮೂರು ವರ್ಷಗಳಲ್ಲಿ ನೆರವು ಪಡೆದ ಫಲಾನುಭವಿಗಳ ಸಂಖ್ಯೆ: 37319. ವಿವರ ಈ ಕೆಳಕಂಡಂತಿದೆ.

(ಲಕ್ಷ ರೂ.ಗಳಲ್ಲಿ)

ಕ್ರ ಸಂ.	ವರ್ಷ	ಸೌಲಭ್ಯ ಪಡೆದ ವಿವರ	
		ಆರ್ಥಿಕ	ಫಲಾನುಭವಿಗಳ ಸಂಖ್ಯೆ
1	2016-17	3452.65	8723
2	2017-18	9732.44	22958
3	2018-19	2620.32	5638
	ಒಟ್ಟು	15805.41	37319

ಸಂ: ಹಿಂವಕ 112 ಬಿಎಂಎಸ್ 2019

(ಸಿ.ಪುಟ್ಟರಂಗಶೆಟ್ಟಿ)
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.